**Akashvani: Bangalore**
**Regional Bulletin In Kannada**
**28.05.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.05.2026: 14.30hrs**

*********

**ಮುಖ್ಯಾಂಶಗಳು :**

1. ಕೆಲವೇ ಕ್ಷಣಗಳಲ್ಲಿ ರಾಜಭವನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ; ಬಳಿಕ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ
2. ರಾಜ್ಯದಲ್ಲಿ ಅಸ್ಥಿರತೆ, ಅರಾಜಕತೆ ನಿರ್ಮಾಣ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪ
3. ಕ್ವಾಂಟಮ್ ಕಂಪ್ಯೂಟಿಂಗ್ ಕುರಿತಂತೆ ಗೂಗಲ್ ಜೊತೆ ಒಪ್ಪಂದಕ್ಕೆ ವಿಟಿಯು ಸಜ್ಜು - ಕುಲಪತಿ ಡಾ. ಎಸ್. ವಿದ್ಯಾಶಂಕರ್
4. ರಾಜ್ಯದೆಲ್ಲೆಡೆ ಬಕ್ರೀದ್ ಹಬ್ಬದ ಸಂಭ್ರಮ; ಮುಸ್ಲಿಂ ಬಾಂಧವರಿಂದ ವಿಶೇಷ ಪ್ರಾರ್ಥನೆ

*********

ಸಿದ್ದರಾಮಯ್ಯ ಅವರು ಇಂದು ಮಧ್ಯಾಹ್ನ ೨.೩೦ಕ್ಕೆ ರಾಜಭವನಕ್ಕೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೩ ಗಂಟೆಗೆ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಲಿದ್ದಾರೆ. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾವೇರಿ ನಿವಾಸದಲ್ಲಿ ಸಂಪುಟದ ಸಹೋದ್ಯೋಗಿಗಳಿಗೆ ಉಪಹಾರ ಕೂಟ ಏರ್ಪಡಿಸಿದ್ದರು. ಈ ಉಪಹಾರ ಕೂಟದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಂಪುಟ ಸಹೋದ್ಯೋಗಿಗಳು ಭಾಗಿಯಾಗಿದ್ದರು. ಈ ಉಪಹಾರ ಕೂಟದಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ನಿರ್ಧಾರವನ್ನು ಪ್ರಕಟಿಸಿದ್ದಾರೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಭವನಕ್ಕೆ ತೆರಳಿ ರಾಜೀನಾಮೆ ನೀಡಲಿದ್ದು, ಡಿ.ಕೆ. ಶಿವಕುಮಾರ್ ಅವರನ್ನು ನೂತನ ಮುಖ್ಯಮಂತ್ರಿ ಮಾಡಲಿದ್ದಾರೆ ಎಂದು ದೃಢಪಡಿಸಿದ್ದಾರೆ. ಈ ಎಲ್ಲಾ ಬೆಳವಣಿಗೆಗಳ ನಡುವೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಬೆಂಗಳೂರಿನಲ್ಲಿ ಇಲ್ಲ ಎನ್ನಲಾಗಿದೆ. ರಾಜ್ಯಪಾಲರು ಪ್ರಸ್ತುತ ಬೆಂಗಳೂರಿನಿಂದ ಹೊರಗಿದ್ದರೂ ಸಿದ್ದರಾಮಯ್ಯ ಅವರ ರಾಜೀನಾಮೆಯನ್ನು ರಾಜ್ಯಪಾಲರ ಕಚೇರಿಗೆ ಸಲ್ಲಿಸುವಂತೆ

ಸೂಚಿಸಲಾಗಿದೆ ಎಂದು ಕಾಂಗ್ರೆಸ್ ಪಕ್ಷದ ಮೂಲಗಳು ತಿಳಿಸಿವೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

*********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಧ್ಯಾಹ್ನ ರಾಜಭವನಕ್ಕೆ ತೆರಳಿ, ರಾಜೀನಾಮೆ ನೀಡಲಿದ್ದಾರೆ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಆರ್.ವಿ. ದೇಶಪಾಂಡೆ ದೃಢಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ವರಿಷ್ಠರು ಈಗಾಗಲೇ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲು ನಿರ್ಧರಿಸಿದ್ದಾರೆ ಎಂದು ತಿಳಿಸಿದ್ದಾರೆ. ರಾಜೀನಾಮೆ ನೀಡಿದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ತೆರಳಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

****ಧ್ವನಿ**** ಆರ್.ವಿ. ದೇಶಪಾಂಡೆ

*********

ಇಂದು ನಡೆದ ಉಪಹಾರ ಕೂಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪರಸ್ಪರ ಅಪ್ಪಿಕೊಂಡಿರುವ ಹಾಗೂ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ ಅವರಿಂದ ಆಶೀರ್ವಾದ ತೆಗೆದುಕೊಳ್ಳುವ ಫೋಟೋಗಳನ್ನು ಕರ್ನಾಟಕ ಕಾಂಗ್ರೆಸ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹಂಚಿಕೊಂಡಿದೆ. ಅಂದು, ಇಂದು, ಎಂದೆಂದೂ ಒಗ್ಗಟ್ಟೇ ನಮ್ಮ ಶಕ್ತಿ, ಸಾರ್ವಜನಿಕರ ಸೇವೆಯೇ ನಮ್ಮ ಗುರಿ ಎಂದು ಟ್ವೀಟ್ ಮಾಡಿದೆ.

*********

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸದ ಬಳಿ ಅವರ ಬೆಂಬಲಿಗರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದಾರೆ. ಡಿ.ಕೆ. ಶಿವಕುಮಾರ್ ಪರ ಘೋಷಣೆ ಕೂಗುತ್ತಾ, ಸಿಹಿ ಹಂಚುತ್ತಾ ಸಂಭ್ರಮಿಸುತ್ತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಜನಸಂದಣಿ ನಿರ್ವಹಿಸಲು ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಬಿಗಿ ಭದ್ರತೆ ಏರ್ಪಡಿಸಲಾಗಿದೆ.

*********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ವರಿಷ್ಠರು ನಡೆಸಿಕೊಂಡ ರೀತಿ ಸರಿಯಾದುದಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಭಿಪ್ರಾಯಪಟ್ಟಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಸ್ಥಿರತೆ, ಅರಾಜಕತೆ ನಿರ್ಮಾಣವಾಗಿದೆ ಎಂದು ಆರೋಪಿಸಿದ್ದಾರೆ. ಮುಂಬರುವ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಲ್ಲಿ ಸಕಾರಾತ್ಮಕ ಚಿಂತನೆಗಳ ಮೂಲಕ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಾಗುವುದು ಎಂದು ತಿಳಿಸಿದ್ದಾರೆ.

*********

ಸಿದ್ದರಾಮಯ್ಯ ಅವರ ಬಳಿಕ ಮುಂದಿನ ಮುಖ್ಯಮಂತ್ರಿ ಯಾರು ಎಂಬುದು ಈಗ ರಾಜ್ಯದ ಮುಂದಿರುವ ದೊಡ್ಡ ಪ್ರಶ್ನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಹೊಸಪೇಟೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಲ್ಲಿ ಉಂಟಾಗಿರುವ ಆರ್ಥಿಕ ಕುಸಿತವನ್ನು ಯಾವ ಮುಖ್ಯಮಂತ್ರಿಗಳಿಂದಲೂ ಸುಧಾರಿಸಲು ಸಾದ್ಯವಿಲ್ಲ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಮಳೆ ಬಂದಿರುವುದರಿಂದ ಕೃಷಿ ಚಟುವಟಿಕೆಗಳು ನಡೆಯುತ್ತಿದ್ದು, ವಿವಿಧ ಜಿಲ್ಲೆಗಳಲ್ಲಿ ರಸಗೊಬ್ಬರಗಳಲ್ಲಿ ಕೃತಕ ಅಭಾವ ಉಂಟಾಗಿದೆ ಎಂದು ದೂರಿದ್ದಾರೆ.

*********

ಬದಲಾಗುತ್ತಿರುವ ತಾಂತ್ರಿಕತೆಗೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಜಾಗತಿಕ ಮಟ್ಟಕ್ಕೆ ಸಜ್ಜುಗೊಳಿಸಲು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ನಾವೀನ್ಯತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾಂಪಸ್‌ಗೆ ಭೇಟಿ ನೀಡುವ ಅನೇಕ ತಜ್ಞರಿಂದ ವಿಟಿಯು ಪಠ್ಯಕ್ರಮವು ದೇಶದ ಪ್ರತಿಷ್ಠಿತ ಐಐಟಿ ಸಂಸ್ಥೆಗಳಿಗೆ ಸಮಾನವಾಗಿದೆ ಎಂಬ ಶ್ಲಾಘನೆ ವ್ಯಕ್ತವಾಗುತ್ತಿದೆ ಎಂದು ತಿಳಿಸಿದ್ದಾರೆ. ತಂತ್ರಜ್ಞಾನದ ಹೊಸ ಆವಿಷ್ಕಾರಗಳಿಗೆ ವಿದ್ಯಾರ್ಥಿಗಳನ್ನು ತೆರೆದಿಡುವ ಉದ್ದೇಶದಿಂದ ವಿಶ್ವವಿದ್ಯಾಲಯದ ವತಿಯಿಂದ ೧೫ ಕೋಟಿ ವೆಚ್ಚದಲ್ಲಿ '೧೯ ಕ್ಯೂಬಿಟ್ ಕ್ವಾಂಟಮ್ ಕಂಪ್ಯೂಟರ್' ಅನ್ನು ಶೀಘ್ರದಲ್ಲೇ ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ. ಇಡೀ ದೇಶದಲ್ಲೇ ಇಂಟರ್ನ್‌ಶಿಪ್ ಪ್ಲಾಟ್‌ಫಾರ್ಮ್ ಒದಗಿಸಿದ ಮೊದಲ ವಿಶ್ವವಿದ್ಯಾಲಯ ಎಂಬ ಹೆಗ್ಗಳಿಕೆಗೆ ವಿಟಿಯು ಪಾತ್ರವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

******ಧ್ವನಿ******ಎಸ್.ವಿದ್ಯಾಶಂಕರ್

ಈ ಡಿಜಿಟಲ್ ವೇದಿಕೆಯ ಮೂಲಕ ಈಗಾಗಲೇ ೮೩ ಸಾವಿರ ವಿದ್ಯಾರ್ಥಿಗಳು ಮನೆಯಲ್ಲೇ ಕುಳಿತು ತಮಗೆ ಬೇಕಾದ ಕೈಗಾರಿಕೆಗಳನ್ನು ಆಯ್ಕೆ ಮಾಡಿಕೊಂಡು ಇಂಟರ್ನ್‌ಶಿಪ್ ಪಡೆಯುವ ಅವಕಾಶ

ಕಲ್ಪಿಸಲಾಗಿದೆ. ಜಾಗತಿಕ ತಂತ್ರಜ್ಞಾನ ದೈತ್ಯ 'ಗೂಗಲ್' ಸಂಸ್ಥೆಯು ವಿಟಿಯು ಜೊತೆ ಒಪ್ಪಂದ ಮಾಡಿಕೊಳ್ಳಲು ಮುಂದೆ ಬಂದಿದೆ.

ಭಾರತದ ಯಾವುದೇ ವಿಶ್ವವಿದ್ಯಾಲಯದ ಇತಿಹಾಸದಲ್ಲಿ ಗೂಗಲ್ ಸಂಸ್ಥೆಯು ಒಪ್ಪಂದ ಮಾಡಿಕೊಳ್ಳುತ್ತಿರುವುದು ಇದೇ ಮೊದಲು. ಈ ಒಪ್ಪಂದದ ಅಡಿಯಲ್ಲಿ ೨೫ ಸಾವಿರ ತಾಂತ್ರಿಕ ವಿದ್ಯಾರ್ಥಿಗಳಿಗೆ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ವಿಷಯದ ಮೇಲೆ ಇಂಟರ್ನ್‌ಶಿಪ್ ತರಬೇತಿ ನೀಡಲು ಗೂಗಲ್ ಸಮ್ಮತಿಸಿದೆ. ಅಂತಾರಾಷ್ಟ್ರೀಯ ಶೃಂಗಸಭೆಯಲ್ಲಿ ಭಾಗವಹಿಸಿ ಬಂದ ಬಳಿಕ ಈ ಒಪ್ಪಂದಕ್ಕೆ ಅಧಿಕೃತವಾಗಿ ಸಹಿ ಹಾಕಲಾಗುವುದು ಎಂದು ಕುಲಪತಿ ಡಾ. ಎಸ್. ವಿದ್ಯಾಶಂಕರ್ ಸ್ಪಷ್ಟಪಡಿಸಿದ್ದಾರೆ.

*********

ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ರಾಜ್ಯದೆಲ್ಲೆಡೆ ಇಂದು ಸಂಭ್ರಮದಿಂದ ಆಚರಿಸಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿ, ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ. ಈ ಪವಿತ್ರ ಹಬ್ಬವು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವ ನೆಲೆಗೊಳ್ಳಲು ಪ್ರೇರಣೆಯಾಗಲಿ ಎಂದು ಹಾರೈಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಮಸ್ತ ಮುಸ್ಲಿಂ ಬಾಂಧವರಿಗೆ ಬಕ್ರೀದ್ ಹಬ್ಬದ ಶುಭಾಶಯ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ ನೆಲಮಂಗಲಗಳಲ್ಲಿ ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಬಕ್ರೀದ್ ಆಚರಿಸುತ್ತಿದ್ದಾರೆ.ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಮುಂಜಾನೆಯಿಂದಲೇ ಮಸೀದಿಗಳಿಗೆ ತೆರಳಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಬಕ್ರೀದ್ ಹಬ್ಬವನ್ನು ಗದಗ ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಮುಸ್ಲೀಂ ಬಾಂಧವರು ಆಚರಿಸಿದರು.  ಜಿಲ್ಲೆಯ ನರಗುಂದ, ಗಜೇಂದ್ರಗಡ, ರೋಣ, ಶಿರಹಟ್ಟಿ, ಲಕ್ಷ್ಮೇಶ್ವರ, ಮುಳಗುಂದ ಪಟ್ಟಣಗಳ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ ಜರುಗಿತು. ಕೋಲಾರದ ಈದ್ಗಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆ ಕಾರ್ಯಕ್ರಮದಲ್ಲಿ ಮುಸ್ಲಿಂ ಗುರುಗಳು ಪ್ರವಚನ ನೀಡಿದರು. ಬೆಳಗಾವಿ ಕೋಟೆ ಆವರಣದ ಹಳೆಯ ಮಸೀದಿ, ನ್ಯಾಯಾಲಯ ಸಮೀಪದ ಈದ್ಗಾ ಮೈದಾನ ಸೇರಿದಂತೆ ನಗರದ ವಿವಿಧೆ ಮತ್ತು ಜಿಲ್ಲೆಯ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಯಿತು. ದಾವಣಗೆರೆ ನಗರದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ

ಮಾಡಿಕೊಂಡರು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ಸಾಮೂಹಿಕ ಪ್ರಾರ್ಥನೆ ಯಲ್ಲಿ ಭಾಗವಹಿಸಿ ಮುಸ್ಲಿಂ ಬಾಂಧವರಿಗೆ ಶುಭ ಕೋರಿದರು.ತ್ಯಾಗ ಬಲಿದಾನದ ಪ್ರತೀಕವಾದ ಬಕ್ರೀದ್ ಹಬ್ಬವನ್ನು ವಿಜಯಪುರ ಜಿಲ್ಲೆಯಾದ್ಯಂತ ಸಂಭ್ರಮದಿಂದ ಆಚರಿಸಲಾಯಿತು.

*********

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಬೇಗೂರು ಗ್ರಾಮದಲ್ಲಿ ಕಾರ್ಮಿಕ ಇಲಾಖೆ ವತಿಯಿಂದ ೧೦ ಎಕರೆ ಜಾಗದಲ್ಲಿ ೩೫ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಶ್ರಮಿಕ ವಸತಿ ಶಾಲೆ ಕಟ್ಟಡ ಸಮುಚ್ಚಯ ನಿರ್ಮಾಣಗೊಳ್ಳಲಿದೆ ಎಂದು ಹೊಸಕೋಟೆ ಶಾಸಕ ಶರತ್ ಕುಮಾರ್ ಬಚ್ಚೆಗೌಡ ತಿಳಿಸಿದ್ದಾರೆ. ಶ್ರಮಿಕ ವಸತಿಶಾಲೆ ಕಟ್ಟಡ ಸಮುಚ್ಚಯದ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರಮಿಕ ವರ್ಗದವರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಈ ವಸತಿ ಶಾಲೆ ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ. ಕಟ್ಟಡದ ಕಾಮಗಾರಿಯು ಮುಂದಿನ ೧೫ ತಿಂಗಳೊಳಗೆ ಪೂರ್ಣಗೊಂಡು ಶ್ರಮಿಕರ ಮಕ್ಕಳಿಗೆ ಜ್ಞಾನಾರ್ಜನೆ ಮಾಡಲು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

*********

ಬನ್ನೇರುಘಟ್ಟ ಮೃಗಾಲಯದಲ್ಲಿ ಕಳೆದ ರಾತ್ರಿ ಜನಿಸಿರುವ ನವಜಾತ ನೀರಾನೆ ಮರಿ ಹೆಣ್ಣಾಗಿದ್ದಲ್ಲಿ ತ್ಯಾವರೆಕೊಪ್ಪ ಮೃಗಾಲಯದಲ್ಲಿ ವೈದ್ಯರಾಗಿದ್ದ ದಿವಂಗತ ಡಾ. ಸಮೀಕ್ಷಾ ರೆಡ್ಡಿ ಗೌರವಾರ್ಥ 'ಸಮೀಕ್ಷಾ' ಎಂದು ಹೆಸರಿಡಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.

*****END****